**Bangalore**
**Regional News**
**28.05.2025 / 2.30 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

೧. ಮಳೆ ಅನಾಹುತ ಹಾಗೂ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ

೨. ಸೇನಾ ಕ್ಯಾಂಟೀನ್‌ಗಳಿಗೆ ಅಬಕಾರಿ ಸುಂಕ ವಿಧಿಸದಿರಲು ಸರ್ಕಾರ ನಿರ್ಧಾರ

೩. ಬೆಂಗಳೂರಿನ ವಿವಿಧೆಡೆ ಪರಿಶಿಷ್ಟ ಜಾತಿಯ ಸಮೀಕ್ಷೆ ಪರಿಶೀಲನೆ ನಡೆಸಿದ ಸಚಿವ ಕೆ.ಹೆ.ಚ್. ಮುನಿಯಪ್ಪ

೪. ನಾಳೆಯಿಂದ ದೇಶಾದ್ಯಂತ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

೫. ಮಹಾರಾಷ್ಟ್ರದಲ್ಲಿ ಧಾರಾಕಾರ ಮಳೆ ಹಿನ್ನೆಲೆ - ಯಾದಗಿರಿ ಜಿಲ್ಲೆಯಲ್ಲಿ ಪ್ರವಾಹದ ಆತಂಕ

************

ರಾಜ್ಯಾದ್ಯಂತ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ತಕ್ಷಣ ಪ್ರವಾಹ ಪೀಡಿತ ಪ್ರದೇಶಗಳಿಗೆ ತೆರಳಿ ಪರಿಹಾರ ಕಾರ್ಯದ ಉಸ್ತುವಾರಿ ನೋಡಿಕೊಳ್ಳುವಂತೆ ಆಯಾ ಜಿಲ್ಲಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಮಳೆಯಿಂದ ಆಗಿರುವ ಅನಾಹುತದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಬಳಿಕ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ್ದಾರೆ. ಇದೇ ೩೦, ೩೧ ರಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಕರೆಯುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ.

************

ಸೈನಿಕರು, ರೈತರು, ವೈದ್ಯರು ಹಾಗೂ ಶಿಕ್ಷಕರು ನಮ್ಮ ತಂದೆ ತಾಯಿಯಷ್ಟೇ ಸ್ಮರಣೀಯರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ "ಜೈ ಹಿಂದ್ ಸಭಾ" ಕಾರ್ಯಕ್ರಮದಲ್ಲಿ ಭಾರತೀಯ ಯೋಧರ ಪರಂಪರೆಯನ್ನು ಶ್ಲಾಘಿಸಿ, ನಿವೃತ್ತ ಯೋಧರು ಹುತಾತ್ಮ ಯೋಧರ ಕುಟುಂಬದ ಸದಸ್ಯರನ್ನು ಸನ್ಮಾನಿಸಿ ಅವರು ಮಾತನಾಡಿದರು. ತ್ಯಾಗ ಮನೋಭಾವದಿಂದ ಯೋಧರು ದೇಶ ರಕ್ಷಣೆಯಲ್ಲಿ ತೊಡಗಿದ್ದಾರೆ. ದೇಶದ ರಕ್ಷಣೆ ಕೇವಲ ಯೋಧರ ಜವಾಬ್ದಾರಿಯಲ್ಲ. ೧೪೦ ಕೋಟಿ ಭಾರತೀಯರ ಜವಾಬ್ದಾರಿ ಎಂದು ಹೇಳಿದ್ದಾರೆ. ಇದೇ ವೇಳೆ ಯೋಧರ ಕ್ಯಾಂಟೀನ್ ಗೆ ಅಬಕಾರಿ ಸುಂಕ ಹಾಕುವುದಿಲ್ಲ ಎಂದು ಮುಖ್ಯಮಂತ್ರಿ ಘೋಷಣೆ ಮಾಡಿದರು. ನಿವೃತ್ತ ಯೋಧರ ಕಲ್ಯಾಣಕ್ಕೆ ಅಗತ್ಯ ಕ್ರಮಗಳನ್ನೆಲ್ಲಾ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

ಧ್ವನಿ - ಮುಖ್ಯಮಂತ್ರಿ ಸಿದ್ಧರಾಮಯ್ಯ ೩೪ ಸೆಕೆಂಡ್ಸ್

************

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ ಇಂದು ಬೆಂಗಳೂರು ನಗರದ ಗೆದ್ದಲಹಳ್ಳಿ, ಸಂಜಯನಗರ ಸೇರಿದಂತೆ ಇತರೆ ಸ್ಥಳಗಳಲ್ಲಿ ಮನೆಗಳಿಗೆ ಭೇಟಿ ನೀಡಿ ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆಯ ಕಾರ್ಯವಿಧಾನಗಳನ್ನು ಪರಿಶೀಲನೆ ನಡೆಸಿದರು. ಪರಿಶೀಲನೆ ಬಳಿಕ ಮಾತನಾಡಿದ ಅವರು ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆಯ ಸಂದರ್ಭದಲ್ಲಿ, ತಮ್ಮ ಮೂಲ ಜಾತಿಯನ್ನು ನೋಂದಣಿ ಮಾಡಬೇಕು ಹಾಗೂ ಸಮೀಕ್ಷೆ ಅಧಿಕಾರಿಗಳಿಗೆ ಸಮಗ್ರ ಮಾಹಿತಿ ನೀಡುವುದರ ಮೂಲಕ ಸಹಕಾರ ನೀಡಬೇಕು ಎಂದು ತಿಳಿಸಿದರು. ಯಾದಗಿರಿ ಜಿಲ್ಲೆಯಲ್ಲಿ ನಡೆಯುತ್ತಿರುವ ಪರಿಶಿಷ್ಟ ಜಾತಿ ಒಳಮೀಸಲಾತಿ ಸಮೀಕ್ಷೆಯಲ್ಲಿ ೨, ಲಕ್ಷದ ೭೯, ಸಾವಿರದ ೨೩೦ ಪರಿಶಿಷ್ಟ ಜಾತಿ ಜನರ ಸಮೀಕ್ಷೆ ನಡೆಸುವ ಮೂಲಕ ಶೇ ೮೫ ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ.

************

ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯದ ವತಿಯಿಂದ ದೇಶಾದ್ಯಂತ ನಾಳೆಯಿಂದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಯಲಿದೆ. ದೇಶದ ೭೩೧ ಕೃಷಿ ವಿಜ್ಞಾನ ಕೇಂದ್ರಗಳ ಮೂಲಕ ೭೦೦ ಜಿಲ್ಲೆಗಳಲ್ಲಿ ಜೂನ್ ೧೨ ರ ವರೆಗೆ ೧೫ ದಿನಗಳ ಕಾಲ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ರಾಷ್ಟ್ರೀಯ ಕಾರ್ಯಕ್ರಮ ಆಯೋಜಿಸಲಾಗಿದೆ.ಅಭಿಯಾನದಡಿ ಕೃಷಿ ಸಮುದಾಯಕ್ಕೆ ಮಣ್ಣಿನ

ಆರೋಗ್ಯ, ಮಣ್ಣು ಮತ್ತು ನೀರಿನ ಸಂರಕ್ಷಣೆ, ಹವಾಮಾನ ಸ್ಥಿತಿ ಸ್ಥಾಪಕ ತಂತ್ರಜ್ಞಾನ, ನೈಸರ್ಗಿಕ ಸಾವಯವ ಕೃಷಿ, ತೋಟಗಾರಿಕೆ ಬೆಳೆಗಳಲ್ಲಿ ಉತ್ಪಾದನಾ ತಂತ್ರಜ್ಞಾನ, ಕುರಿತು ಮಾರ್ಗದರ್ಶನ ನೀಡಲಾಗುವುದು ಎಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಟಿ.ಎನ್.ದೇವರಾಜ್ ಹೇಳಿದ್ದಾರೆ.

ಧ್ವನಿ : ಡಾ.ದೇವರಾಜ್ ೩೩ ಸೆಕೆಂಡ್ಸ್

ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ೧೩೫ ಹಳ್ಳಿಗಳಲ್ಲಿ 'ಮುಂಗಾರು ಪೂರ್ವ ಆಂದೋಲನ - ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ದ ಮೂಲಕ ಜಾಗೃತಿಯನ್ನು ಮೂಡಿಸಲಾಗುತ್ತಿದೆ. ಕೃಷಿಯಲ್ಲಿ ಡ್ರೋಣ್ ಬಳಕೆ ಹಾಗೂ ಇತರ ಪ್ರಾತ್ಯಕ್ಷಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಬಿ.ಜಿ.ಹನುಮಂತರಾಯ ತಿಳಿಸಿದ್ದಾರೆ.

************

ರಾಜ್ಯದ ವಿವಿಧೆಡೆ ಮಳೆ ಮುಂದುವರೆದಿದೆ. ಕೊಡಗು ಜಿಲ್ಲೆಯಲ್ಲಿ ಮಳೆ ಪ್ರಮಾಣ ಇಳಿಮುಖವಾಗಿದೆ.. ಕಾವೇರಿ, ಲಕ್ಷ್ಮಣತೀರ್ಥ ನದಿಗಳು ಮೇ ಕೊನೇ ವಾರದಲ್ಲಿಯೇ ತುಂಬಿ ಹರಿಯುತ್ತಿದೆ. ಮಳೆ ಮತ್ತು ಗಾಳಿಯಿಂದಾಗಿ ಜಿಲ್ಲೆಯ ಬಹುತೇಕ ಕಡೆ ವಿದ್ಯುತ್ ಕಂಬಗಳು, ಮರಗಳು ಧರೆಗುರುಳಿದ್ದರಿಂದಾಗಿ ಅನೇಕ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ.ಭಾಗಮಂಡಲ ವ್ಯಾಪ್ತಿಯಲ್ಲಿ ಕಳೆದ ೨೪ ಗಂಟೆ ಅವಧಿಯಲ್ಲಿ ದಾಖಲೆಯ ೧೦೩ ಮಿಲಿ ಮೀಟರ್ ಮಳೆಯಾಗಿದೆ. ಉತ್ತಮ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಕೊಡಗು ಜಿಲ್ಲೆಯ ಹಾರಂಗಿ ಜಲಾಶಯಕ್ಕೂ ನೀರಿನ ಹರಿವು ಹೆಚ್ಚಳವಾಗಿದ್ದು, ೩೯೦೦ ಕ್ಯೂಸೆಕ್ ಒಳಹರಿವಿದೆ. ಮಹಾರಾಷ್ಟ್ರದಲ್ಲಿ ಧಾರಾಕಾರ ಮಳೆ ಆಗುತ್ತಿರುವುದರಿಂದ ಯಾದಗಿರಿ ಜಿಲ್ಲೆಯ ಭೀಮಾ ಹಾಗೂ ಕೃಷ್ಣಾ ನದಿಗಳ ವ್ಯಾಪ್ತಿಯ ೮೦ ಗ್ರಾಮಗಳಲ್ಲಿ ಸೂಕ್ತ ಮುನ್ನೆಚ್ಚರಿಕೆಗಳ ಬಗ್ಗೆ ಅರಿವು ಮೂಡಿಸುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಸೂಚಿಸಿದ್ದಾರೆ. ಈಗಾಗಲೇ ನೇಮಿಸಿದ ನೋಡಲ್ ಅಧಿಕಾರಿಗಳು, ನೇಮಿಸಿದ ತಂಡಗಳೊಂದಿಗೆ ಮುಂಬರುವ ಎರಡು ದಿನಗಳಲ್ಲಿ ಸಂಬಂಧಿಸಿದ ಗ್ರಾಮಗಳಿಗೆ ಭೇಟಿ ನೀಡಿ ನದಿಯಲ್ಲಿ ಸಾರ್ವಜನಿಕರು ಇಳಿಯದಂತೆ ಅರಿವು ಮೂಡಿಸಬೇಕು ಎಂದು ತಿಳಿಸಿದ್ದಾರೆ.ಭೀಮಾ ನದಿ ಪ್ರವಾಹದಿಂದ ೩೫ ಗ್ರಾಮ ಹಾಗೂ ಕೃಷ್ಣಾ ನದಿ ಪ್ರವಾಹ ಉಂಟಾದಲ್ಲಿ ೪೫ ಗ್ರಾಮಗಳು ಬಾಧಿತವಾಗುವ ಸಾಧ್ಯತೆ ಇದೆ. ನಗರ ಹೊರವಲಯದ ಭೀಮಾ ನದಿ ನೀರು ದಡ ಮೀರಿ ಹರಿಯುತ್ತಿದ್ದು, ೫ ಸಾವಿರ ಕ್ಯೂಸೆಕ್ ನೀರು ನದಿಗೆ ಹರಿ ಬಿಡಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

************

ಮಂಡ್ಯ ಜಿಲ್ಲಾ ಪ್ರವಾಸದಲ್ಲಿರುವ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು, ಇಂದು ಮಂಡ್ಯ ನಗರದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ತೂಕದ ಯಂತ್ರದ ಪರಿಶೀಲನೆ, ಪರವಾನಗಿ ಪಡೆದಿರುವ ಬಗ್ಗೆಯೂ ಪರಿಶೀಲನೆ ನಡೆಸಿದರು. ವಾಹನಗಳನ್ನು ಎ.ಪಿ.ಎಂ.ಸಿಯಲ್ಲಿ ಎಲ್ಲೆಂದರಲ್ಲಿ ನಿಲುಗಡೆ ಮಾಡಬಾರದು. ಸೂಕ್ತ ಸ್ಥಳ ಗುರುತಿಸಿ ವಾಹನವನ್ನು ಅಲ್ಲೇ ನಿಲುಗಡೆ ಮಾಡಬೇಕು ಎಂದು ನಿರ್ದೇಶನ ನೀಡಿದ್ದಾರೆ. ಬಳಿಕ ಉಪಲೋಕಾಯುಕ್ತರು ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ದ್ವಿಚಕ್ರ ವಾಹನವನ್ನು ಮೂರು ದಿನಗಳಿಕ್ಕಿಂತ ಹೆಚ್ಚು ನಿಲುಗಡೆ ಮಾಡಿದರೆ ಪೊಲೀಸ್ ಠಾಣೆಗೆ ದೂರು ನೀಡುವಂತೆ ಸೂಚಿಸಿದ್ದಾರೆ.

************

ರಾಜ್ಯಸರ್ಕಾರದ ಬೆಲೆ ಏರಿಕೆ ವಿರುದ್ಧ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ನೇತೃತ್ವದ ಬಿಜೆಪಿ ನಿಯೋಗ ಇಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರಿಗೆ ಮನವಿ ಪತ್ರ ಸಲ್ಲಿಸಿತು. ಬ್ರ್ಯಾಂಡ್ ಬೆಂಗಳೂರಿನಂತಹ ಅವಾಸ್ತವಿಕ ಯೋಜನೆ, ದಿನ ಬಳಕೆಯ ವಸ್ತುಗಳ ಬೆಲೆ ಹೆಚ್ಚಳ. ತ್ಯಾಜ್ಯ ವಿಲೇವಾರಿ ನಿರ್ಲಕ್ಷ್ಯ ಸೇರಿದಂತೆ ಹಲವು ವಿಚಾರಗಳ ಕುರಿತು ಬಿಜೆಪಿ ನಿಯೋಗ ಮನವಿ ಸಲ್ಲಿಸಿತು. ಇದೇ ವೇಳೆ ಮಹಾನಗರ ಪಾಲಿಕೆಯಲ್ಲಿನ ಭ್ರಷ್ಟಾಚಾರವನ್ನು ತಗ್ಗಿಸುವುದು ಮತ್ತು ಕಾಮಗಾರಿಗಳ ಗುಣಮಟ್ಟ ಕಾಪಾಡಲು ಅಗತ್ಯ ಕ್ರಮ ಜರುಗಿಸಬೇಕು. ಪಾಲಿಕೆಯಲ್ಲಿ ಪರಿಸರ ಸ್ನೇಹಿ ಆಡಳಿತ ನೀಡಲು ಮುಂದಾಗಬೇಕು ಎಂದು ನಿಯೋಗ ಆಗ್ರಹಿಸಿತು. ತುಷಾರ್ ಗಿರಿನಾಥ್, ಅಗತ್ಯ ಕ್ರಮ ಕೈಗೊಳ್ಳುವುದಾಗಿ ನಿಯೋಗಕ್ಕೆ ಭರವಸೆ ನೀಡಿದರು.ನಿಯೋಗದಲ್ಲಿ ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕ ಎಸ್. ಮುನಿರಾಜು ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

************

ದೇಶದಲ್ಲೇ ವಿದೇಶಿ ಪಕ್ಷಿಗಳ ಸಂತಾನೋತ್ಪತ್ತಿಗೆ ಹಾಗೂ ಪಕ್ಷಿಗಳ ಆಶ್ರಯಕ್ಕೆ ಹೆಸರಾದ ಕೊಕ್ಕರೆ ಬೆಳ್ಳೂರಿನಲ್ಲಿ ಈ ಬಾರಿ ಬೇಸಿಗೆಯಲ್ಲಿ ಪಕ್ಷಿಗಳ ಕೊರತೆ ಎದುರಾಗಿದೆ.ಪ್ರತಿ ಬಾರಿಯೂ ಜನವರಿ ತಿಂಗಳಲ್ಲೇ ಮ್ಯಾನ್ಮಾರ್, ಶ್ರೀಲಂಕಾ, ಬಾಂಗ್ಲಾದೇಶ ಸೇರಿದಂತೆ ಹಲವು ದೇಶಗಳಿಂದ ಸಂತಾನೋತ್ಪತ್ತಿ ಹಾಗೂ ಆಶ್ರಯಕ್ಕೆ ಕೊಕ್ಕರೆ ಬೆಳ್ಳೂರಿಗೆ ಬರುತ್ತಿದ್ದ ನೂರಾರು ಪಕ್ಷಿಗಳು ಈ ಬಾರಿ ಕೇವಲ ಬೆರಳೆಣಿಕೆಯಷ್ಟು ಮಾತ್ರ ಬಂದಿವೆ.

************

ಖ್ಯಾತ ಗಾಯಕ, ಗಾನ ಗಂಧರ್ವ ಡಾ.ಎಸ್.ಪಿ.ಬಾಲಸುಬ್ರಹ್ಮಣ್ಯಂ ಅವರ ಜನ್ಮದಿನೋತ್ಸವದ ಅಂಗವಾಗಿ ನಿರಂತರ ೨೪ಗಂಟೆಗಳ 'ಬಾಲಯಾನ ಯಶೋಯಾನ' ಗಾಯನ ಕಾರ್ಯಕ್ರಮವನ್ನು ಮಂಗಳೂರಿನಲ್ಲಿ ಆಯೋಜಿಸಿರುವುದಾಗಿ ಗಾಯಕ ಯಶವಂತ್ ಎಂ.ಜಿ ತಿಳಿಸಿದ್ದಾರೆ.

************

<u>ಸಂಕ್ಷಿಪ್ತ ಸುದ್ದಿಗಳು</u>

೧. ತಮಿಳಿನಿಂದ ಕನ್ನಡ ಹುಟ್ಟಿದ್ದು ಎಂದು ವಿವಾದಾತ್ಮಕ ಹೇಳಿಕೆ ನೀಡಿರುವ ನಟ ಕಮಲ್ ಹಾಸನ್ ವಿರುದ್ಧ ಕನ್ನಡಪರ ಸಂಘಟನೆಗಳು ಪ್ರತಿಭಟನೆ ನಡೆಸಿವೆ. ಮೈಸೂರಿನ ಹಳೇ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಜಮಾಯಿಸಿದ ಕನ್ನಡಪರ ಸಂಘಟನೆ ಕಾರ್ಯಕರ್ತರು, ಕನ್ನಡಿಗರ ಬಳಿ ಕ್ಷಮೆ ಕೇಳುವಂತೆ ಆಗ್ರಹಿಸಿದ್ದಾರೆ.

೨. ೨೦೨೪-೨೫ ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಹೋಟೆಲ್, ಗ್ಯಾರೇಜ್, ವಾಣಿಜ್ಯ ಸಂಸ್ಥೆ, ಕಾರ್ಖಾನೆಗಳ ಮೇಲೆ ಅನಿರೀಕ್ಷಿತ ತಪಾಸಣೆ ಮತ್ತು ದಾಳಿ ನಡೆಸಿ ೩ ಬಾಲ ಹಾಗೂ ೩೭ ಕಿಶೋರ ಕಾರ್ಮಿಕರು ಸೇರಿ ಒಟ್ಟು ೪೦ ಮಕ್ಕಳ ರಕ್ಷಣೆ ಮಾಡಲಾಗಿದೆ. ೧೧ ಪ್ರಕರಣಗಳಲ್ಲಿ ೨ಲಕ್ಷದ೨೦ಸಾವಿರ ರೂ.ಗಳ ದಂಡ ವಸೂಲಾತಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ.

೩. ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್ ಇಂದು ಜಿಮ್ಸ್ ಆಸ್ಪತ್ರೆ ಆವರಣದಲ್ಲಿರುವ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ ಸಾರ್ವಜನಿಕರ ಬೇಡಿಕೆಯಂತೆ ಪ್ರತಿ ದಿನ ೧,೦೦೦ ಪ್ರಮಾಣದಲ್ಲಿ ಉಪಹಾರ, ಊಟ ಪೂರೈಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

*******END*******